ಕರ್ನಾಟಕ ವಿಧಾನ ಸಭೆ ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ (ಪೌರತ್ವ)

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 11/01/2020

# ಪೌರತ್ವ ಕಾಯ್ದೆ ನಿನ್ನೆಯಿಂದ ಜಾರಿಗೆ

## ಗೆಜೆಟ್ ಅಧಿಸೂಚನೆ ಹೊರಡಿಸಿದ ಕೇಂದ್ರ ಸರ್ಕಾರ

11/1/2020

ಪಾಕ್, ಬಾಂಗ್ಲಾ, ಅಫ್ಘಾನಿಸ್ತಾನದಿಂದ ಭಾರತಕ್ಕೆ ವಲಸೆ ಬಂದ ಸಿಖ್, ಜೈನ, ಕ್ರೈಸ್ತ, ಬೌದ್ಧ, ಪಾರ್ಸಿ, ಹಿಂದುಗಳಿಗೆ ಪೌರತ್ವ

**ವಲಸಿಗರು 2014ರ ಡಿ.31ರೊಳಗೆ ಭಾರತಕ್ಕೆ ಬಂದಿದ್ದರೆ ಅವರು ಭಾರತೀಯ ಪೌರ.**

ಈ ಮುಂಚಿನ 11 ವರ್ಷಗಳ ಬದಲಾಗಿ 5 ವರ್ಷ ಭಾರತದಲ್ಲಿ ನೆಲೆಸಿದ್ದರೆ ಸಾಕು.

**ಅರುಣಾಚಲ, ಅಸ್ಸಾಂ, ನಾಗಾಲ್ಯಾಂಡ್, ಮಿಜೋರಾಂ, ಮಣಿಪುರ, ಮೇಘಾಲಯ ಮತ್ತು ತ್ರಿಪುರಾ ರಾಜ್ಯಗಳಿಗೆ ಕಾನೂನಿನಿಂದ ವಿನಾಯ್ತಿ**

**ನವದೆಹಲಿ:** ದೇಶಾದ್ಯಂತ ಕೋಲಾಹಲವನ್ನೇ ಸೃಷ್ಟಿಸಿರುವ ಪೌರತ್ವ ತಿದ್ದುಪಡಿ ಕಾಯ್ದೆ ಶುಕ್ರವಾರದಿಂದಲೇ ದೇಶಾದ್ಯಂತ ಜಾರಿಗೆ ಬಂದಿದೆ. ಈ ಕುರಿತಂತೆ ಕೇಂದ್ರ ಸರ್ಕಾರ ಶುಕ್ರವಾರ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಲ್ಲಿ ಧಾರ್ಮಿಕ ಕಾರಣಕ್ಕಾಗಿ ಕಿರುಕುಳಕ್ಕೆ ಗುರಿಯಾಗಿರುವ ಹಿಂದೂ, ಕ್ರೈಸ್ತ, ಸಿಖ್, ಜೈನ ಪಾರ್ಸಿ, ಬೌದ್ಧ ಸಮುದಾಯಗಳಿಗೆ ಭಾರತೀಯ ಪೌರತ್ವ ನೀಡುವ ಉದ್ದೇಶ ಹೊಂದಿರುವ ಈ ಕಾನೂನಿಗೆ ಈಗಾಗಲೇ ವಿಪಕ್ಷಗಳು ಭಾರೀ ವಿರೋಧ ವ್ಯಕ್ತಪಡಿಸಿವೆ. ವಿಪಕ್ಷಗಳ ಭಾರೀ ವಿರೋಧದ ಹೊರತೂ, ಕಾನೂನು ಜಾರಿ ಮಾಡಿಯೇ ಸಿದ್ಧ. ಯೋಜನೆ ಜಾರಿಯಿಂದ ಒಂದು ಹೆಜ್ಜೆಯೂ ಹಿಂದಿಡುವುದಿಲ್ಲ ಎಂದು ಈಗಾಗಲೇ ಕೇಂದ್ರ ಗೃಹ ಸಚಿವ ಅಮಿತ್ ಶಾ ಘೋಷಿಸಿದ್ದಾರೆ. ಮತ್ತೊಂದೆಡೆ ಎಲ್ಲೆಡೆ ವದಂತಿ ಹಬ್ಬಿಸಿರುವಂತೆ, ಯಾವುದೇ ಭಾರತೀಯರ ಪೌರತ್ವವನ್ನು ಇದು ಕಸಿದುಕೊಳ್ಳುವುದಿಲ್ಲ, ಬದಲಾಗಿ ಇದು ಪೌರತ್ವ ನೀಡುವ ಮಸೂದೆ ಎಂದು ಸರ್ಕಾರ ಈಗಾಗಲೇ ಸ್ಪಷ್ಟಪಡಿಸಿದೆ. ಇದರ ಹೊರತಾಗಿಯೂ ಕಾಂಗ್ರೆಸ್, ಎಡಪಕ್ಷಗಳು, ಟಿಎಂಸಿ ಆಡಳಿತವಿರುವ ರಾಜ್ಯಗಳು ಕಾಯ್ದೆ ಜಾರಿಗೊಳಿಸುವುದಿಲ್ಲ ಎಂದು ಪಟ್ಟು ಹಿಡಿದಿವೆ.

5